



ಅರುಣ ಪಿ. ಭಟ್ಟ

## ವಾರಭವಿಷ್ಯ: 25.04.2024ರಿಂದ 01.05.2024ರವರೆಗೆ




ಹಣಕಾಸಿನ ಹರಿವು ಹೆಚ್ಚಿಸಿಕೊಳ್ಳಲು ಹೊಸ ಆಯ್ಕೆಗಳು ಗೋಚರವಾಗುತ್ತವೆ. ಮನೆಗೆ ಅಗತ್ಯ ಇರುವ ವಸ್ತುಗಳನ್ನು ಖರೀದಿ ಮಾಡುವ ಸಾಧ್ಯತೆ ಇದೆ. ವೈಯಕ್ತಿಕ ಬದುಕಿನಲ್ಲಿ ಸಕಾರಾತ್ಮಕ ಬದಲಾವಣೆಗಳು ಕಾಣಿಸಿಕೊಳ್ಳುತ್ತವೆ. ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ವಾರಾಂತ್ಯಕ್ಕೆ ಶುಭ ಸುದ್ದಿ ಕೇಳಲಿದ್ದೀರಿ. ಶುಭದಿನ 28. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವೃತ್ತಿಪರರಿಗೆ ಉತ್ತಮವಾದ ಸಮಯ ಇದು. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿರುವವರಿಗೆ ಯಶಸ್ಸು ದೊರೆಯಲಿದೆ. ಕ್ರಿಯಾತ್ಮಕ ಕ್ಷೇತ್ರಗಳಲ್ಲಿ ತೊಡಗಿರುವವರಿಗೆ ಪ್ರಗತಿ. ಪೋಷಕರು ನಿಮ್ಮ ಪ್ರಗತಿಯಿಂದಾಗಿ ಬಹಳ ಸಂತೋಷಪಡಲಿದ್ದಾರೆ. ನಿರ್ಮಾಣ ಕೆಲಸಗಳನ್ನು ಕೈಗೆತ್ತಿಕೊಳ್ಳುವ ಸಾಧ್ಯತೆ. ಹಣಕಾಸು ವಿಚಾರಕ್ಕೆ ಸಂಬಂಧಿಸಿದಂತೆ ಶುಭ ಸುದ್ದಿ ಕೇಳಲಿದ್ದೀರಿ. ಶುಭದಿನ 29. ಗಣಪತಿ ಸುಬ್ರಹ್ಮಣ್ಯ ಜಪಿಸಿ.




ಉದ್ಯೋಗ ಬದಲಾವಣೆಗಾಗಿ ಪ್ರಯತ್ನಿಸುತ್ತಿರುವವರಿಗೆ ಶುಭ ಸುದ್ದಿ. ಕ್ರೀಡೆಗಳಲ್ಲಿ ಯಶಸ್ಸು ದೊರೆಯಲಿದೆ. ಸಾಮಾಜಿಕ ಜೀವನದಲ್ಲಿ ಸಕ್ರಿಯರಾಗಿ ತೊಡಗಿಕೊಳ್ಳಲಿದ್ದೀರಿ. ಈವರೆಗೆ ಗೊಂದಲ ಹುಟ್ಟುಹಾಕಿದ್ದ ವಿಚಾರಗಳಿಗೆ ಪರಿಹಾರ ದೊರೆಯಲಿದೆ. ಮನೆಯಲ್ಲಿ ಶುಭ ಕಾರ್ಯ ಮಾಡಲಿದ್ದೀರಿ. ನೈತಿಕ ವಿಚಾರಗಳನ್ನೇ ಹೆಚ್ಚು ಚಿಂತಿಸುತ್ತೀರಿ. ಶುಭದಿನ 30. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಕಾನೂನು ವ್ಯಾಜ್ಯಗಳಿದ್ದಲ್ಲಿ ಜಯ. ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ಉದ್ಯೋಗ ಸ್ಥಳದಲ್ಲಿ ಬಹಳ ಮುಖ್ಯವಾದ ಜವಾಬ್ದಾರಿಯನ್ನು ನಿಮಗೆ ವಹಿಸಲಾಗುವುದು. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ಸಾಮಾಜಿಕವಾಗಿ ನಿಮ್ಮ ಶ್ರಮ ಹಾಗೂ ದುಡಿಮೆಗೆ ಮನ್ನಣೆ ದೊರೆಯಲಿದೆ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಶುಭದಿನ 26. ಕಾಲ ಭೈರವನ ಸೇವೆ ಮಾಡಿರಿ.




ಈ ವಾರ ಉಲ್ಲಸಿತವಾಗಿ ಸಮಯ ಕಳೆಯಲಿದೆ. ನಿಮ್ಮ ಶ್ರಮಕ್ಕೆ ಮೆಚ್ಚುಗೆ ವ್ಯಕ್ತವಾಗಲಿದೆ. ವೈವಾಹಿಕ ಜೀವನವು ಸಂತೋಷದಾಯಕವಾಗಿ ಇರುತ್ತದೆ. ವಾರದ ಮಧ್ಯ ಭಾಗದಲ್ಲಿ ಮುಖ್ಯವಾದ ಯೋಜನೆಯ ಮೇಲುಸ್ತುವಾರಿ ಮಾಡಬೇಕಾಗುತ್ತದೆ. ವಿದೇಶದಲ್ಲೇ ನೆಲೆಯಾಗುವ ಪ್ರಯತ್ನದ ಪ್ರಕ್ರಿಯೆಗಳು ಸರಾಗವಾಗಿ ಪೂರ್ಣಗೊಳ್ಳಲಿವೆ. ಶುಭದಿನ 30. ಈಶ್ವರನಿಗೆ ತಿಲಾರ್ಚನೆ ಮಾಡಿರಿ.




ಗೌರವ ಪಡೆಯುವ ಅವಕಾಶ ಇದೆ. ಕೆಲಸಗಳು ಅಂದುಕೊಂಡ ವೇಗದಲ್ಲಿ ಸಾಗುವುದಿಲ್ಲ. ಹಣಕಾಸು ಹೂಡಿಕೆಯಲ್ಲಿ ನಿರೀಕ್ಷಿತ ಯಶಸ್ಸು ಪಡೆಯಲಿದ್ದೀರಿ. ಪ್ರತಿಸ್ಪರ್ಧಿಗಳ ವಿರುದ್ಧ ಮೇಲುಗೈ ಸಾಧಿಸಲಿದ್ದೀರಿ. ಆರೋಗ್ಯದಲ್ಲಿ ಸ್ವಲ್ಪಮಟ್ಟಿಗೆ ಏರುಪೇರಾಗಲಿದೆ. ಆಹಾರ ನೀರು ಸೇವನೆಯ ಬಗ್ಗೆ ಎಚ್ಚರ ಇರಲಿ. ಶುಭ ಸುದ್ದಿ ಕೇಳಲಿದ್ದೀರಿ. ಶುಭದಿನ 27. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ವಿವಿಧ ಕ್ಷೇತ್ರಗಳಲ್ಲಿ ಪ್ರಗತಿ ಪಡೆಯಲಿದ್ದೀರಿ. ಕ್ರೀಡಾ ಕ್ಷೇತ್ರದಲ್ಲಿ ತೊಡಗಿಕೊಂಡವರಿಗೆ ಯಶಸ್ಸು ಪಡೆಯುವ ಯೋಗ ಇದೆ. ವೈಯಕ್ತಿಕ ಬದುಕು ಸಂತುಷ್ಟವಾಗಿರುತ್ತದೆ. ಪ್ರೀತಿಪಾತ್ರರ ಜೊತೆಗೆ ಸಮಯ ಕಳೆಯಲಿದ್ದೀರಿ. ಸಂತಾನ ಅಪೇಕ್ಷಿತರಿಗೆ ಶುಭ ಸುದ್ದಿ ಪಡೆಯುವ ಯೋಗ ಇದೆ. ಆರ್ಥಿಕ ವ್ಯವಹಾರಗಳು ಲಾಭದಾಯಕವಾಗಲಿದೆ. ಮುಖ್ಯವಾದ ಒಪ್ಪಂದ ಬರಲಿದೆ. ಶುಭದಿನ 28. ಲಿಂಗಾಷ್ಟಕ ಓದಿರಿ.




ವೈಯಕ್ತಿಕ ಬದುಕು ಉತ್ತಮವಾಗಲಿದೆ. ಶಿಕ್ಷಣ ಕ್ಷೇತ್ರದಲ್ಲಿ ಇರುವವರಿಗೆ ಪ್ರಗತಿ. ಗುತ್ತಿಗೆ ಕಾರ್ಯ ನಿರ್ವಹಿಸುವವರಿಗೆ ಸೇವೆ ಕಾಯಂ ಆಗುವ ಸಾಧ್ಯತೆ. ಗೃಹ ನಿರ್ಮಾಣ ವಿಚಾರದಲ್ಲಿ ಪ್ರಗತಿ ಆಗಲಿದೆ. ಮಕ್ಕಳು ಮಾಡುವ ಕೆಲಸಗಳಿಂದ ಹೆಮ್ಮೆ ಮೂಡಲಿದೆ. ವಾರದ ಮಧ್ಯ ಭಾಗದಲ್ಲಿ ಹಣಕಾಸು ಹರಿವು ಹೆಚ್ಚಲಿದೆ. ಕೆಲಸಗಳು ಪೂರ್ಣವಾಗಲು ನೀವೇ ಮುಂಚೂಣಿಯಲ್ಲಿರಬೇಕು. ಶುಭದಿನ 29. ಹನುಮಾನ್ ಚಾಲೀಸ್ ಓದಿರಿ.




ಮನೆಯಲ್ಲಿ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವ ಸಾಧ್ಯತೆ ಇದೆ. ಮನರಂಜನೆ ಕ್ಷೇತ್ರಗಳಲ್ಲಿ ಕಾರ್ಯ ನಿರ್ವಹಿಸಲು ಬಯಸುವವರಿಗೆ ಅವಕಾಶ ದೊರೆಯಲಿದೆ. ವಾರದ ಮಧ್ಯ ಭಾಗದಲ್ಲಿ ಮನೆಯ ಚಟುವಟಿಕೆಗಳು ಬಿರುಸಾಗುತ್ತವೆ. ಆರೋಗ್ಯ ಸಮಸ್ಯೆಗಳಿಗೆ ಪರಿಹಾರ ದೊರೆಯುತ್ತದೆ. ಹಣಕಾಸಿನ ಹರಿವು ಉತ್ತಮವಾಗಿರುತ್ತದೆ. ಶುಭದಿನ 26. ನವದುರ್ಗಾ ಆರಾಧನೆ ಮಾಡಿರಿ.




ಆಸ್ತಿ ವ್ಯವಹಾರಗಳು ನೀವು ಅಂದುಕೊಂಡಂತೆ ನಡೆಯುತ್ತವೆ. ಕಾನೂನು ವ್ಯಾಜ್ಯಗಳಿದ್ದಲ್ಲಿ ಪರಿಹಾರ ದೊರೆಯಲಿದೆ. ಹಲವು ಅವಕಾಶಗಳು ನಿಮಗೆ ದೊರೆಯಲಿವೆ. ರಾಜಕಾರಣ ಹಾಗೂ ನಾಯಕತ್ವ ಸ್ಥಾನದಲ್ಲಿ ಇರುವವರಿಗೆ ಇನ್ನಷ್ಟು ಪ್ರಾಮುಖ್ಯ ದೊರೆಯಲಿದೆ. ಅಧಿಕಾರದಲ್ಲಿ ಇರುವವರು ನಿಮ್ಮ ಕೆಲಸದ ಸಾಮರ್ಥ್ಯಕ್ಕೆ ಮೆಚ್ಚುಗೆಯ ಮಾತುಗಳನ್ನು ಹೇಳಲಿದ್ದಾರೆ. ಶುಭದಿನ 28. ಚಂಡಿಪಾರಾಯಣ ಮಾಡಿರಿ.




ಮನೆಯಲ್ಲಿ ಪ್ರಶಾಂತವಾದ ವಾತಾವರಣ ಇರುತ್ತದೆ. ಕ್ರಿಯಾತ್ಮಕ ಕ್ಷೇತ್ರಗಳಲ್ಲಿ ಇರುವವರಿಗೆ ತಮ್ಮ ಕೌಶಲ ಹೆಚ್ಚಿಸಿಕೊಳ್ಳಲು ಅವಕಾಶಗಳು ದೊರೆಯಲಿವೆ. ಪ್ರೀತಿಪಾತ್ರರ ಜೊತೆಗೆ ಮನರಂಜನೆ ಕಾರ್ಯಕ್ರಮಗಳಲ್ಲಿ ಭಾಗಿಯಾಗಲಿದ್ದೀರಿ. ಹಿರಿಯ ಅಧಿಕಾರಿಗಳಿಂದ ಮೆಚ್ಚುಗೆಯ ಮಾತುಗಳನ್ನು ಕೇಳಲಿದ್ದೀರಿ. ಕೆಲ ಆರೋಗ್ಯ ಸಮಸ್ಯೆಗಳು ಕಾಡಬಹುದು. ಶುಭದಿನ 29. ಸೌಂದರ್ಯ ಲಹರಿ ಪಠಿಸಿರಿ.




ಕಾನೂನು ವ್ಯಾಜ್ಯಗಳಿದ್ದಲ್ಲಿ ನಿಮ್ಮ ಪರವಾಗಿ ತೀರ್ಪು ಬರುವ ಸಾಧ್ಯತೆ. ಮೇಲಧಿಕಾರಿಗಳಿಂದ ನಿರೀಕ್ಷಿತ ಮಟ್ಟದ ಪ್ರೋತ್ಸಾಹ ಬೆಂಬಲ ದೊರೆಯಲಿದೆ. ವಾರದ ಮಧ್ಯ ಭಾಗದಲ್ಲಿ ಶುಭ ಸುದ್ದಿಯನ್ನು ಕೇಳಲಿದ್ದೀರಿ. ಉದ್ಯೋಗಸ್ಥರಿಗೆ ಹೊಸ ಜವಾಬ್ದಾರಿಗಳು ಹೆಗಲೇರಲಿವೆ. ಆರ್ಥಿಕ ವ್ಯವಹಾರಗಳು ಲಾಭದಾಯಕವಾಗಿ ಇರಲಿವೆ. ಪಿತ್ರಾರ್ಜಿತವಾದ ಆಸ್ತಿಯಿಂದ ಲಾಭವಿದೆ. ಶುಭದಿನ 30. ವಿಷ್ಣು ಸಹಸ್ರನಾಮ ಪಠಿಸಿರಿ.